## ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 17 ಕವಿಇ 2013

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:14.10.2014.

## ಅಧಿಸೂಚನೆ

ಕರ್ನಾಟಕ ಸರ್ಕಾರಿ ನೌಕರರ (ಕಡ್ಡಾಯ ಜೀವ ವಿಮೆ) ನಿಯಮಗಳಿಗೆ ಇನ್ನಷ್ಟು ತಿದ್ದುಪಡಿ ಮಾಡುವ ನಿಯಮಗಳ ಕರಡನ್ನು ಅದರಿಂದ ತೊಂದರೆಗೊಳಗಾಗಬಹುದಾದ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಅಧಿಕೃತ ರಾಜ್ಯಪತ್ರದಲ್ಲಿ ಆ ಕರಡು ಪ್ರಕಟವಾದ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆಗಳು/ ಸಲಹೆಗಳು ಅಹ್ವಾನಿಸಿ ದಿನಾಂಕ: 07.08.2014 ರಂದು ಕರ್ನಾಟಕ ರಾಜ್ಯ ಪತ್ರದ ಭಾಗ-4ಎ ರಲ್ಲಿ ಅಧಿಸೂಚನೆ ಸಂಖ್ಯೆ: ಆಇ 17 ಕವಿಇ 2013, ದಿನಾಂಕ: 03.06.2014ರಲ್ಲಿ ಕರ್ನಾಟಕ ನಾಗರೀಕ ಸೇವಾ ಅಧಿನಿಯಮ, 1978 (ಕರ್ನಾಟಕ ಅಧಿನಿಯಮ 1990 ಸಂಖ್ಯೆ:14)ರ ಪ್ರಕರಣ 8 ರೊಂದಿಗೆ ಓದಿಕೊಳ್ಳಲಾದ 3ನೇ ಪ್ರಕರಣವನ್ನು (1)ನೇ ಉಪ ಪ್ರಕರಣದ ಮೂಲಕ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ,

ಸದರಿ ರಾಜ್ಯ ಪತ್ರವನ್ನು 7ನೇ ಆಗಸ್ಟ್, 2014ರಂದು ಸಾರ್ವಜನಿಕರಿಗೆ ದೊರೆಯುವಂತೆ ಮಾಡಲಾಗಿರುವುದರಿಂದ,

ಈ ಬಗ್ಗೆ ರಾಜ್ಯ ಸರ್ಕಾರಕ್ಕೆ ಯಾವುದೇ ಆಕ್ಷೇಪಣೆಗಳು/ ಸಲಹೆಗಳು ಬಂದಿರುವುದಿಲ್ಲವಾದ್ದರಿಂದ,

ಈಗ 1978ರ ಕರ್ನಾಟಕ ನಾಗರೀಕ ಸೇವಾ ಅಧಿನಿಯಮದ (1990ರ ಕರ್ನಾಟಕ ಅಧಿನಿಯಮ ಸಂಖ್ಯೆ: 14) ಪ್ರಕರಣ 8 ರೊಂದಿಗೆ ಓದಿಕೊಳ್ಳಲಾದ 3ನೇ ಪ್ರಕರಣದ (1)ನೇ ಉಪ ಪ್ರಕರಣದಿಂದ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಗಿನ ನಿಯಮವನ್ನು ಈ ಮೂಲಕ ಮಾಡುತ್ತದೆ.

## ನಿಯಮಗಳು

1. ಹೆಸರು ಮತ್ತು ಪ್ರಾರಂಭ:- (1) ಈ ನಿಯಮವನ್ನು ಕರ್ನಾಟಕ ಸರ್ಕಾರಿ ನೌಕರರ (ಕಡ್ಡಾಯ ಜೀವವಿಮೆ) (ತಿದ್ದುಪಡಿ) ನಿಯಮಗಳು, 2014 ಎಂದು ಕರೆಯತಕ್ಕದ್ದು.

(2) ಈ ನಿಯಮ ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. ನಿಯಮ 27ಅ ಗೆ ತಿದ್ದುಪಡಿ:- ಕರ್ನಾಟಕ ಸರ್ಕಾರಿ ನೌಕರರ (ಕಡ್ಡಾಯ ಜೀವವಿಮೆ) ನಿಯಮಗಳು, 1958ರ ನಿಯಮ 27ಅ ದ ಉಪನಿಯಮ (1)ರಲ್ಲಿ ನಮೂದಿಸಲಾದ 'ರೂ.510/- (ಐದು ನೂರ ಹತ್ತು ರೂಪಾಯಿಗಳು)' ಎಂಬ ಅಕ್ಷರಗಳು, ಅಂಕಿಗಳು, ಆವರಣಗಳು ಹಾಗೂ ಪದಗಳ ಬದಲಾಗಿ 'ರೂ.1,000/- (ಒಂದು ಸಾವಿರ ರೂಪಾಯಿಗಳು)' ಎಂದು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎನ್. ಲಕ್ಷ್ಮಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

JD (Ad)/Reg (Ad)
14/10
PS 957
16/10/14

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಹಾಗೂ ಮುದ್ರಿತ 100 ಪ್ರತಿಗಳನ್ನು ಬರೂಡಾಗಿ ಆರ್ಥಿಕ ಇಲಾಖೆಯ ಮುಂಗಡಗಳು ಶಾಖೆಗೆ ಕಳುಹಿಸಿಕೊಡುವಂತೆ ಕೋರಲಾಗಿದೆ.

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು (ಎ ಅಂಡ ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ/ ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
4. ಉಚ್ಚನ್ಯಾಯಾಲಯ/ಲೋಕಾಯುಕ್ತ/ಕರ್ನಾಟಕ ಆಡಳಿತ ನ್ಯಾಯಮಂಡಳಿಯ ರಿಜಿಸ್ಟ್ರಾರ್‌ಗಳಿಗೆ
5. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
6. ಕಾರ್ಯದರ್ಶಿ, ವಿಧಾನಮಂಡಲ, ವಿಧಾನಸೌಧ, ಬೆಂಗಳೂರು.
7. ಎಲ್ಲಾ ವಿಭಾಗೀಯ ಆಯುಕ್ತರು ಮತ್ತು ಎಲ್ಲಾ ಜಿಲ್ಲಾಧಿಕಾರಿಗಳು
8. ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು,
9. ಆರ್ಥಿಕ ಇಲಾಖೆಯ ಗಣಕ ಕೋಶ- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10. ಕಛೇರಿ ಪ್ರತಿ /ಶಾಖಾರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

*****